# AKKAMAHADEVI WOMEN'S UNIVERSITY, VIJAYAPURA

(Accredited with 'B' Grade by NAAC)

सत्यमेव जयते

**AND**

# MINISTRY OF PARLIAMENTARY AFFAIRS, GOVERNMENT OF INDIA

*Cordially invites you for the Inaugural Function of*




Chief Guests : **Shri Ajaykumar Sarnaik**
Hon'ble Former Member of Parliament,
Bagalakot, Karnataka.

**Prof. Chandrakant Yatanoor**
Registrar,
Central University of Karnataka, Kalaburagi.

**Dr. Pralhad Mane**
Group Co-Ordinator (14th NYPC)
Shivaji University, Kolhapur.

President : **Prof. Sabiha Bhumigowda**
Hon'ble Vice-Chancellor, A.W.U. Vijayapura

**Venue: Dr. B.R. Ambedkar Auditorium,**
**Akkamahadevi Women's University, Vijayapura**
**Date : 31-10-2017 Time : 11:00 am**

*All are Welcome*

**Prof. Onkar Kakade**
Director, Students Welfare
A.W. U. Vijayapura.

**Prof. L.R. Nayak**
Registrar
A.W. U. Vijayapura

# AKKAMAHADEVI WOMEN'S UNIVERSITY, VIJAYAPURA

……………………………………………………………………………………

DATE: 28-10-2017

**ಪ್ರಕಟಣೆ ಕೃಪೆಗಾಗಿ ..**

**ವಿಜಯಪುರ:** ಕೇಂದ್ರ ಸರ್ಕಾರದ ಸಂಸದೀಯ ವ್ಯವಹಾರಗಳ ಸಚಿವಾಲಯ ಮತ್ತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯದ ಸಂಯುಕ್ತ ಆಶ್ರಯದಲ್ಲಿ 14 ನೇ ರಾಷ್ಟ್ರೀಯ ಯುವ ಸಂಸತ್ ಸ್ಪರ್ಧೆ ಮತ್ತು ಮಹಿಳಾ ವಿಶ್ವವಿದ್ಯಾಲಯದ ವಿದ್ಯಾರ್ಥಿನಿಯರ ಒಕ್ಕೂಟದ ಉದ್ಘಾಟನಾ ಸಮಾರಂಭವನ್ನು ಇದೇ 31 ರಂದು ಬೆಳಿಗ್ಗೆ 11 ಗಂಟೆಗೆ ವಿವಿಯ ಜ್ಞಾನಶಕ್ತಿ ಆವರಣ ಡಾ.ಬಿ.ಆರ್,ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಉದ್ಘಾಟನಾ ಸಮಾರಂಭದಲ್ಲಿ ಬಾಗಲಕೋಟೆ ಲೋಕಸಭಾ ಕ್ಷೇತ್ರ ಮಾಜಿ ಸದಸ್ಯ ಹಾಗೂ ರಾಜ್ಯದ ಯುವಜನ ಸೇವೆ ಮತ್ತು ಕ್ರೀಡಾ ಖಾತೆ ಮಾಜಿ ಸಚಿವ ಅಜಯಕುಮಾರ ಸರನಾಯಕ, ಕಲಬುರ್ಗಿಯ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಸಚಿವ ಹಾಗೂ ಕಲಬುರಗಿ ವಿವಿ ರಾಜಕೀಯ ಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಪ್ರೊ.ಚಂದ್ರಕಾಂತ ಯಾತನೂರು ಹಾಗೂ ಕೇಂದ್ರ ಸರ್ಕಾರದ ಸಂಸದೀಯ ವ್ಯವಹಾರಗಳ ಸಚಿವಾಲಯದಿಂದ ನಿಯುಕ್ತರಾಗಿರುವ ಸಮೂಹ ಸಂಯೋಜಕ ಹಾಗೂ ಕೊಲ್ಹಾಪುರ ಶಿವಾಜಿ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಪ್ರಲ್ಹಾದ ಮಾನೆ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಸಬಿಹಾ ಭೂಮಿಗೌಡ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿವಿಯ ಕುಲಸಚಿವ ಪ್ರೊ.ಎಲ್.ಆರ್. ನಾಯಕ್ ಹಾಗೂ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದ ನಿರ್ದೇಶಕ ಪ್ರೊ.ಓಂಕಾರ ಕಾಕಡೆ ಜಂಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಯುವ ಸಂಸತ್:** ಉದ್ಘಾಟನಾ ಸಮಾರಂಭದ ನಂತರ ಮಹಿಳಾ ವಿಶ್ವವಿದ್ಯಾನಿಲಯದ ಕನ್ನಡ ಅಧ್ಯಯನ ವಿಭಾಗದ ಸಭಾಂಗಣದಲ್ಲಿ ವಿಶೇಷವಾಗಿ ಏರ್ಪಡಿಸಿರುವ 'ಸಂಸತ್ ಭವನ' ಮಾದರಿಯ ಸಭಾಂಗಣದಲ್ಲಿ ಯುವ ಸಂಸತ್ ಕಲಾಪಗಳು ನಡೆಯಲಿವೆ. 55 ನಿಮಿಷದ ಈ ಕಲಾಪಗಳಲ್ಲಿ ಮೊದಲು ನೂತನ ಸಂಸತ್ ಸದಸ್ಯರ ಪ್ರಮಾಣ ವಚನ ಕಾರ್ಯಕ್ರಮ ನಡೆಯಲಿದೆ. ನಂತರ ಇತ್ತೀಚೆಗೆ ನಿಧನರಾದ ಗಣ್ಯರಿಗೆ ಶ್ರದ್ಧಾಂಜಲಿ, ಸಂಸತ್ತಿಗೆ ನೂತನ ಸಚಿವರ ಪರಿಚಯ, ಪ್ರಶ್ನೋತ್ತರ, ಹಕ್ಕುಚ್ಯುತಿ ನಿರ್ಣಯ ಮಂಡನೆ, ಕಾಗದ ಪತ್ರಗಳ ಮಂಡನೆ, ರಾಜ್ಯಸಭೆಯಲ್ಲಿ ಅನುಮೋದನೆಗೊಂಡ ಮಸೂದೆ ವರದಿ ಮಂಡನೆ, ಸಂಸತ್ತಿಗೆ ವಿದೇಶಿ ಗಣ್ಯರ ಭೇಟಿ, ಗಮನ ಸೆಳೆಯುವ ಸೂಚನೆ, ಮಸೂದೆ ಮಂಡನೆ, ಅವಿಶ್ವಾಸ ನಿರ್ಣಯ ಮಂಡನೆ ಹೀಗೆ ಸಂಸತ್ ಕಲಾಪಗಳು ನಡೆಯಲಿವೆ. ಸಂಸತ್ ಕಲಾಪಗಳ ಅಣಕು ಪ್ರದರ್ಶನದಲ್ಲಿ ವಿದ್ಯಾರ್ಥಿನಿಯರು ಸ್ಪೀಕರ್, ಪ್ರಧಾನ ಮಂತ್ರಿ, ವಿರೋಧ ಪಕ್ಷದ ನಾಯಕರು, ವಿವಿಧ ಖಾತೆಗಳ ಸಚಿವರು, ಆಡಳಿತ ಮತ್ತು ವಿರೋಧ ಪಕ್ಷಗಳ ಸಂಸತ್ ಸದಸ್ಯರಾಗಿ ಮತ್ತು ಸೆಕ್ರೆಟರಿ ಜನರಲ್, ಸಂಸತ್ತಿನ ಅಧಿಕಾರಿಗಳು ಮತ್ತು ಮಾಧ್ಯಮ ಪ್ರತಿನಿಧಿಗಳಾಗಿ ಈ ಯುವ ಸಂಸತ್ ಸ್ಪರ್ಧೆಯಲ್ಲಿ ಭಾಗಿಗಳಾಗಲಿದ್ದಾರೆ. ಈ ಸ್ಪರ್ಧೆಯಲ್ಲಿ ವಿಜೇತರಾದ ಆರು ಜನ ವಿದ್ಯಾರ್ಥಿನಿಯರಿಗೆ ಕೇಂದ್ರ ಸರ್ಕಾರದ ಸಂಸದೀಯ ವ್ಯವಹಾರಗಳ ಸಚಿವಾಲಯ ಪ್ರಶಸ್ತಿಗಳನ್ನು ನೀಡಲಿದೆ. ಈ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಪ್ರಶಸ್ತಿ ಪತ್ರ ನೀಡಲಾಗುತ್ತದೆ.

ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ನಡೆಯಲಿರುವ ಮೊಟ್ಟ ಮೊದಲ ಯುವ ಸಂಸತ್ ಸ್ಪರ್ಧೆಯನ್ನು ಅಚ್ಚುಕಟ್ಟಾಗಿ ನಡೆಸಲು ಎಲ್ಲಾ ಬಗೆಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ಕುಲಸಚಿವ ಪ್ರೊ.ಎಲ್.ಆರ್.ನಾಯಕ್ ತಿಳಿಸಿದ್ದಾರೆ.

************